ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 28 ನೇ ಸೆಪ್ಟೆಂಬರ್, 2020

ಅರಣ್ಯ ಸಂಪತ್ತುಗಳನ್ನು ರಕ್ಷಿಸುವ ಬಗ್ಗೆ

ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

775 (830) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹಾಸನ ಜಿಲ್ಲೆಯ ಆಲೂರು ಮತ್ತು ಸಕಲೇಶಪುರ ವಲಯಗಳಲ್ಲಿ ಕೆಲವು ಖಾಸಗಿ ರೆಸಾರ್ಟ್‌ನವರು ಕಾಯ್ದಿರಿಸಿದ ಅರಣ್ಯದೊಳಗೆ ರಸ್ತೆಗಳನ್ನು ನಿರ್ಮಾಣ ಮಾಡಿರುವ ಮತ್ತು ಈ ಭಾಗದಲ್ಲಿ ಪ್ರಾಣಿ ಭೇಟಿಗಾಗಿ ಪ್ರೋತ್ಸಾಹ ನೀಡುತ್ತಿರುವ ಬಗ್ಗೆ ದೂರುಗಳು ಬಂದಿವೆಯೇ ; ಬಂದಿದ್ದಲ್ಲಿ, ಈ ಸಂಬಂಧ ಏನು ಕ್ರಮ ಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಆ) ಯಶಲೂರು, ಆಲೂರು ಮತ್ತು ಸಕಲೇಶಪುರ ವಲಯಗಳಲ್ಲಿ ವನ್ಯ ಮೃಗಗಳ ಕಳ್ಳಬೇಟೆ ಮತ್ತು ಅರಣ್ಯ ಸಂಪತ್ತು ಲೂಟಿ ಮಾಡುತ್ತಿರುವವರ ವಿರುದ್ಧ ಕಳೆದ 3 ವರ್ಷಗಳಲ್ಲಿ ದಾಖಲಾಗಿರುವ ಪ್ರಕರಣಗಳೆಷ್ಟು ; (ವಿವರ ನೀಡುವುದು)

(ಇ) ವನ್ಯ ಮೃಗಗಳ ಕಳ್ಳಬೇಟೆ ಮತ್ತು ಅರಣ್ಯ ಸಂಪತ್ತು ಕಳ್ಳತನ ತಡೆಗಟ್ಟಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)